ಹೊನ್ನಾವರ ತಾಲ್ಲೂಕು ಹಾಡಗೇರಿಯಲ್ಲಿ ವಿದ್ಯುತ್ ಸಮಸ್ಯೆ

294(446); ಶ್ರೀ ಮಂಕಾಳ ಸುಬ್ಬ ವೈದ್ಯ (ಭಟ್ಕಳ)

ಅ) ಉತ್ತರ ಕನ್ನಡ ಜಿಲ್ಲೆ ಹೊನ್ನಾವರ ತಾಲ್ಲೂಕು ನಗರ ಬಸ್ತಿಗೇರಿ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಹಾಡಗೇರಿ ಮಜಕಿಯ ಹಲವಾರು ವಾಸ್ತವ್ಯದ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ರೀತಿ ಎಷ್ಟು ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡಿಲ್ಲ;

ಇ) ಈ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು;

ಈ) ಮೂಲಭೂತ ಸೌಕರ್ಯವಾದ ವಿದ್ಯುತ್ ಸಂಪರ್ಕ ನೀಡಲು ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು? (ವಿವರ ನೀಡುವುದು)

ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಇಂಧನ ಸಚಿವರು)

ಅ) ಹೌದು.

ಆ) 63 ಗ್ರಾಮೀಣ ಮನೆಗಳು

ಇ) ಆರ್.ಜಿ.ಜಿ.ವಿ.ವೈ 11ನೇ ಯೋಜನೆಯಡಿಯಲ್ಲಿ ವಿದ್ಯುತ್ ಸಂಪರ್ಕ ನೀಡುವ ಕಾಮಗಾರಿಗಳನ್ನು ಸೇರಿಸಲಾಗಿತ್ತು. ಆದರೆ ಕೇಂದ್ರ ಸರ್ಕಾರವು ಮಂಜೂರು ಮಾಡಿದ ಮೊತ್ತದಲ್ಲಿ ಈ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸಾಧ್ಯವಾಗಿಲ್ಲ. ಆದುದರಿಂದ ಸದರಿ ಮನೆಗಳಿಗೆ ಆರ್.ಜಿ.ಜಿ.ವಿ.ವೈ 12ನೇ ಯೋಜನೆ ಯಡಿಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ವಿದ್ಯುತ್ ಸಂಪರ್ಕ ಕಲ್ಪಿಸುವುದು ಒಂದು ನಿರಂತರ ಕಾಮಗಾರಿಯಾಗಿರುತ್ತದೆ. ಬಾಕಿ ಉಳಿದಿರುವ ಬಿಪಿಎಲ್ ಮನೆಗಳನ್ನು

ವಿದ್ಯುದೀಕರಣಗೊಳಿಸಲು ಆರ್.ಜಿ.ಜಿ.ವಿ.ವೈ 12ನೇ ಯೋಜನೆಯಡಿಯಲ್ಲಿ ಕೈಗೊಳ್ಳಲಾಗುವುದು.

ಬೆಳೆ ವಿಮೆ

295(161); ಶ್ರೀ ಮೋಹಿಯುದ್ದಿನ್ ಬಾವಾ ಬಿ.ಎ. (ಮಂಗಳೂರು ನಗರ ಉತ್ತರ)

ಅ) ದಕ್ಷಿಣ ಕನ್ನಡ ಜಿಲ್ಲೆಯ ಪ್ರಮುಖ ಬೆಳೆಗಳಾದ ಅಡಿಕೆ, ಕಾಳುಮೆಣಸು, ಕೊಕೊ, ಅನಾನಸ್, ಗೇರು ಕೃಷಿಯನ್ನು ಬೆಳೆ ವಿಮಾ ವ್ಯಾಪ್ತಿಗೆ ತರುವ ಯೋಜನೆಯ ಸರ್ಕಾರಕ್ಕಿದೆಯೇ;

ಆ) ಹಾಗಿದ್ದಲ್ಲಿ, ಬೆಳೆಹಾನಿಗೆ ಸಂಬಂಧಿಸಿದಂತೆ, ಸರ್ಕಾರ ಕೈಗೊಂಡ ಕ್ರಮಗಳೇನು?

ಡಾ॥ ಶ್ಯಾಮನೂರು ಶಿವಶಂಕರಪ್ಪ (ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು)

ಅ) ಹವಮಾನಾಧಾರಿತ ಬೆಳೆ ವಿಮೆ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಯಾವುದೇ ಬೆಳೆಯನ್ನು ಬೆಳೆ ವಿಮಾ ಯೋಜನೆಯಡಿ ಅಳವಡಿಸಬೇಕಾದರೆ, ಬೆಳೆ ಕಟಾವು ಪ್ರಯೋಗಗಳಿಂದ ಕಂಡುಹಿಡಿಯಲಾದ ಇಳುವರಿ ಮಾಹಿತಿ ಕನಿಷ್ಠ 10 ವರ್ಷದ ಅವಧಿಗೆ ಲಭ್ಯವಿರಬೇಕು ಹಾಗೂ ಹೋಬಳಿ ಹಂಗಾಮಿನಲ್ಲಿ 200 ಹೆಕ್ಟೇರ್ ಪ್ರದೇಶ ಅಥವಾ ಗ್ರಾಮ ಪಂಚಾಯಿತಿ ಮಟ್ಟದಲ್ಲಿ 100 ಹೆಕ್ಟೇರ್ ಪ್ರದೇಶ ಆವರಿಸಬೇಕಾಗಿರುತ್ತದೆ.

ಮುಂದುವರೆದು, ಬೆಳೆ ಸಾಲ ಪಡೆದ ರೈತರು ಕಡ್ಡಾಯವಾಗಿ ಬೆಳೆ ವಿಮೆ ಯೋಜನೆಯಡಿ ಒಳಪಡುವುದರಿಂದ, ಬೆಳೆ ಸಾಲದ ಮೊತ್ತದ ಅಥವಾ ಬೆಳೆ ಉತ್ಪಾದನಾ ವೆಚ್ಚ ಶೇ.6 ರಷ್ಟು ಮೊತ್ತವನ್ನು ವಿಮಾ ಕಂತಿನ ಮೊತ್ತವಾಗಿ ಪಾವತಿಸಬೇಕಾಗಿರುತ್ತದೆ. ಅದಲ್ಲದೇ, ತೋಟಗಾರಿಕೆ ಬೆಳೆಗಳಾದ ಅಡಿಕೆ, ಕಾಳುಮೆಣಸು, ಕೋಕೊ, ಗೇರು